ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು.

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

2 ಮತ್ತು 3ನೇ ಖಂಡಗಳು.

ಅಧ್ಯಕ್ಷರು: "ಖಂಡ 2 ಮತ್ತು 3 ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

(2 ಮತ್ತು 3ನೇ ಖಂಡಗಳು ವಿಧೇಯಕಕ್ಕೆ ಸೇರಿಸಲ್ಪಟ್ಟವು)

ಖಂಡ 1 ಇತ್ಯಾದಿ:

ಅಧ್ಯಕ್ಷರು:- ಪ್ರಸ್ತಾಪ ಏನೆಂದರೆ "ಮೊದಲನೇ ಖಂಡ ಹೆಸರು ಮತ್ತು ಆವತರಣಿಕೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾಪವನ್ನು ಅಂಗೀಕರಿಸಲಾಯಿತು

(ಮೊದಲನೇ ಖಂಡ ಹೆಸರು ಮತ್ತು ಆವತರಣಿಕೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು.)

ಪ್ರಸ್ತಾಪದ ಅಂಗೀಕಾರ

ಶ್ರೀ ಎಂ. ರಾಜಶೇಖರ ಮೂರ್ತಿ:- ಮಾನ್ಯ ಅಧ್ಯಕ್ಷರೇ "1990ನೇ ಇಸವಿಯ ಧನ ವಿನಿಯೋಗ ವಿಧೇಯಕ-2ನ್ನು ಅಂಗೀಕರಿಸಬೇಕೆಂದು" ಕೋರುತ್ತೇನೆ.

ಅಧ್ಯಕ್ಷರು:- ಪ್ರಸ್ತಾಪ ಏನೆಂದರೆ "1990ನೇ ಇಸವಿಯ ಧನ ವಿನಿಯೋಗ ವಿಧೇಯಕ-2ನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಪ್ರಕಟಣೆ

ಅಧ್ಯಕ್ಷರು:- ವಿಧಾನ ಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶ ಬಂದಿದೆ. ವಿಧಾನ ಪರಿಷತ್ತಿನ ಕಾರ್ಯವಿಧಾನ ನಡವಳಿಕೆಯ ನಿಯಮ 114ರ ಮೇರೆಗೆ ವಿಧಾನಸಭೆಯಿಂದ ಅಂಗೀಕಾರವಾದ 1990ನೇ ಇಸವಿಯ ಕರ್ನಾಟಕ ಭೂಸುಧಾರಣಾ ತಿದ್ದುಪಡಿ ವಿಧೇಯಕವನ್ನು ಕರ್ನಾಟಕ ವಿಧಾನ ಪರಿಷತ್ತಿನಲ್ಲಿ ದಿನಾಂಕ 16-7-1990ರಂದು ಅನುಮೋದಿಸಲಾಯಿತು ಎಂದು ತಿಳಿಸುತ್ತೇನೆ.

ಈಗ ಸಭೆ ಮುಂದುವರೆದು ನಾಳೆ ಪ್ರಾತಃಕಾಲ 9-30ಕ್ಕೆ ಮತ್ತೆ ಸಮಾವೇಶಗೊಳ್ಳುತ್ತದೆ.

(ಸದನವು ರಾತ್ರಿ 8 ಗಂಟೆ 35 ನಿಮಿಷಕ್ಕೆ ಮುಕ್ತಾಯವಾಗಿ ಪುನಃ 17ನೇ ಜುಲೈ 1990ರ ಮಂಗಳವಾರ ಪ್ರಾತಃಕಾಲ 9 ಗಂಟೆ 30 ನಿಮಿಷಕ್ಕೆ ಸೇರಲು ನಿಶ್ಚಯಿಸಲಾಯಿತು)

(† ಈ ಚಿಪ್ಪೆ ಮಾನ್ಯ ಸದಸ್ಯರ ಭಾಷಣ ಅಥವಾ ಟಿಪ್ಪಣಿಯನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ.)